# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಾಮಾಜಿಕ ಅರಣ್ಯ ಇಲಾಖೆಯ ವಲಯ ಅರಣ್ಯಾಧಿಕಾರಿಯವರಿಗೆ ತಡೆಹಿಡಿದಿದ್ದ ಕಡ್ಡಾಯ ನಿರೀಕ್ಷಣ ಅವಧಿಯನ್ನು ಸೇವಾವಧಿ ಎಂದು ಘೋಷಿಸಿರುವುದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ವೆಚ್ಚ 5 ಶಾಖೆಯ ಕಡತ ಸಂಖ್ಯೆ: ಆಇ 554 ವೆಚ್ಚ 5/2020 (ಇ)

**ಪ್ರಸ್ತಾವನೆ:**

ಶ್ರೀ ಕೆ. ಶಂಕರ್, ವಲಯ ಅರಣ್ಯಾಧಿಕಾರಿ, ಸಾಮಾಜಿಕ ಅರಣ್ಯ ಇಲಾಖೆರವರು 2.4.2018 ಮತ್ತು 7.7.2018ರಿಂದ 17.11.2018ರವರೆಗೆ ಸ್ಥಳ ನಿಯುಕ್ತಿ ಇಲ್ಲದೆ ಇದ್ದು ಈ ಅವಧಿಯನ್ನು ಕಡ್ಡಾಯ ನಿರೀಕ್ಷಣಾ ಅವಧಿಯೆಂದು ಅಧಿಸೂಚನೆ ಸಂಖ್ಯೆ: ಬಿ1/ಸಿಬ್ಬಂದಿ/ಸಿಆರ್ 154/2017-18 ದಿನಾಂಕ:9.5.2019ರಲ್ಲಿ ಘೋಷಿಸಿದೆ. ತದನಂತರ ಸದರಿಯವರನ್ನು ಬಳ್ಳಾರಿ ಪ್ರಾದೇಶಿಕ ವಲಯಕ್ಕೆ ಸ್ಥಳ ನಿಯುಕ್ತಿಗೊಳಿಸಿ ಪುನ: ಸದರಿಯನ್ನು ದಿನಾಂಕ:17.7.2020ರಂದು ತರೀಕೆರೆ ಸಾಮಾಜಿಕ ಅರಣ್ಯ ವಲಯ ಇಲ್ಲಿಗೆ ಸ್ವತಂತ್ರ ಪ್ರಭಾರದ ಮೇಲೆ ಸ್ಥಳ ನಿಯುಕ್ತಿಗೊಳಿಸಿದೆ. ಸದರಿಯವರಿಗೆ ಕಡ್ಡಾಯ ನಿರೀಕ್ಷಣಾ ಅವಧಿಯಲ್ಲಿನ ಬಾಕಿ ವೇತನ, ತದನಂತರ ಬಳ್ಳಾರಿ ಮತ್ತು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ಫೆಬ್ರವರಿ 2021ರವರೆಗಿನ ವೇತನವನ್ನು ಸೆಳೆಯಲು ರೂ.11.29ಲಕ್ಷಗಳನ್ನು ಹೆಚ್ಚುವರಿಯಾಗಿ ಲೆಕ್ಕ ಶೀರ್ಷಿಕೆ 2406-00-101-0-26-005ರಡಿ ಒದಗಿಸಿ ಜಿಲ್ಲಾ ಪಂಚಾಯತ್, ಚಿಕ್ಕಮಗಳೂರಿಗೆ ಬಿಡುಗಡೆಗೊಳಿಸಲು ಪ್ರಸ್ತಾವಿಸಲಾಗಿದೆ.

ಅಗತ್ಯ ದಾಖಲೆ/ಸ್ಪಷ್ಟೀಕರಣ ಮತ್ತು ಲೆಕ್ಕಾಚಾರ ಪಟ್ಟಿಯನ್ನು ಒದಗಿಸಿರುವುದರಿಂದ ಕೋರಿರುವ ರೂ.11.29ಲಕ್ಷ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 10 ವೆಚ್ಚ 6/2021(ಇ) ದಿನಾಂಕ: 11ನೇ ಜನವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರ ಒಟ್ಟು ರೂ11.29ಲಕ್ಷ (ರೂಪಾಯಿ ಹನ್ನೊಂದು ಲಕ್ಷದ ಮತ್ತು ಇಪ್ಪತ್ತೊಂಬತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|
| 1 | 2 | 3 | 4 | 5 |
| 1 | ಚಿಕ್ಕಮಗಳೂರು | 2406-00-101-0-26-005 | 11.29 | 11.29 |
| | ಒಟ್ಟು | | **11.29** | **11.29** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

1415619837

12.1.21.

<u>ಈ ರೀತಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಕಾಲಂ 2ರಡಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರುಗಳ ಬಾಕಿ ವೇತನ ವೆಚ್ಚವನ್ನು ಸೆಳೆಯಲು ಖಜಾನೆ-2ರಲ್ಲಿ ಲಭ್ಯಪಡಿಸುವಂತೆ ಹೆಚ್.ಆರ್.ಎಂ.ಎಸ್.ಗೆ ಸೂಚಿಸಿದೆ.</u>

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳುರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಅರಣ್ಯ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಚಿಕ್ಕಮಗಳೂರು
7. ಆರ್ಥಿಕ ಇಲಾಖೆ ವೆಚ್ಚ 5 ಶಾಖೆ ಕಡತಕ್ಕೆ
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ